# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ ವಾರ್ಡ್ ನಂ.61(ಎಸ್.ಕೆ ಗಾರ್ಡನ್)

## ವಾರ್ಡ್ ಸಮಿತಿ ಸಭಾ ದಿನಾಂಕ: 19-12-2020 ರ ಸಭಾ ನಡವಳಿ

ಸಂಖ್ಯೆ; ಸ.ಕಾನಿ.ಅ (ಪು.ನ)/ಪಿಆರ್/06/20-21

ದಿನಾಂಕ: 19-12-2020 ರಂದು ಬೆಳ್ಳಿಗ್ಗೆ 11.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | Atif Ahmed | Nodal Officer ward No. 61-S.K Garden & Asst. Executive Engineer, J.C. Nagar Sub-division |
| 2 | Raviwaddar | Asst. Executive Engineer, Pulikeshinagar Sub-division |
| 3 | Dr. Zaiba | Medical Officer |
| 4 | Venkatesh | Senior Health Inspector |
| 5 | Harish | JHI Ward No 61 |
| 6 | Srinivas | Senior Vetenary Inspector |
| 7 | Smt: M. Meena | Welfare Tailoring Teacher |
| 8 | Ragavendra N | Tax Inspector |
| 9 | Narasimhaiah | BWSSB |
| 10 | Manohar | JE Bescom |

ಶ್ರೀ ಅತೀಫ್ ಅಹಮ್ಮದ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ 19-12-2020 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

- **ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಆದೇಶದ ಮೇರೆಗೆ ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮಾಹಿತಿಗಾಗಿ:**

  1. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ.10096/2020 (GIM-PIL) ರ ನಿರ್ದೇಶನದಲ್ಲಿ ತಿಳಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Hawking Children Identisication Survey ಕೈಗೊಳಬೇಕಾಗಿದ್ದು, ವಾರ್ಡ್‌ಗಳಲ್ಲಿ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಕೊಳಗೇರಿಗಳು (ಸ್ಲಂ) ಬಸ್ ಮತ್ತು ರೈಲ್ವೆ ನಿಲ್ದಾಣ ಹಾಗೂ ಇತರೆ ಸ್ಥಳಗಳನ್ನು ಸ್ಥಳೀಯ ನಿವಾಸಿ ಕಲ್ಯಾಣ ಸಂಘ (Residential Welfare Association (RWA) ಹಾಗೂ ಸ್ವಯಂ ಸೇವಾ ಸಂಘಗಳ (NGO) ಮುಖೇನ ಗುರುತಿಸಿ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಕಲೆಹಾಕಲು ಕ್ರಮ ವಹಿಸುವುದು.

2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ.15768/2013 ರ ಹಿನ್ನೆಯಲ್ಲಿ ಹೊರಡಿಸಲಾದ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನಲ್ಲಿ ಶಾಲೆಗಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು (ಬಿಬಿಎಂಪಿ ಒಳಗೊಂಡಂತೆ) ವಾರ್ಡ್‌ನ ಸದಸ್ಯರನ್ನು ಅದರ ಅಧ್ಯಕ್ಷರನನಾಗಿ ವಾರ್ಡ್ ಕಮಿಟಿಯನ್ನು ರಚಿಸತಕ್ಕದ್ದು ಆ ವಾರ್ಡ್ ವ್ಯಾಪ್ತಿಯ ಮುಖ್ಯೋಪಾಧ್ಯಾಯರ ಅಂಗನವಾಡಿ ಕಾರ್ಯಕರ್ತರು ಎನ್.ಜಿ.ಓ ಗಳನ್ನು ಸದಸ್ಯರನ್ನಾಗಿ ಮಾಡಿಕೊಂಡು ಕಾಲಕಾಲಕ್ಕೆ ಸದರಿ ಸಮಿತಿಯ ಕಾಲಕಾಲಕ್ಕೆ ತಪಾಸಣೆ ನಡೆಸಿ, ಶಾಲೆಗಯಿಂದ ವಂಚಿತರಾದ ಹಾಗೂ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ, ಬಸ್ ನಿಲ್ದಾಣ ರೈಲ್ವೇ ನಿಲ್ದಾಣ, ಕಾರ್ಖಾನೆಗಳು ಮಾರುಕಟ್ಟೆ ಮುಂತಾದ ಸ್ಥಳಗಳಲ್ಲಿ ಮಕ್ಕಳನ್ನು ಗುರುತಿಸಿ ಸಂಬಂಧಿಸಿದ ಇಲಾಖೆಗಳಾದ ಮಕ್ಕಳ ಕ್ಲ್ಯಾಣಾಧಿಕಾರಿ (CDPO) ಕಾರ್ಮಿಕ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸುವ ಬಗ್ಗೆ ಕ್ರಮ ವಹಿಸುವುದು ಎಂಬುದಾಗಿ ಇದ್ದು, ಇದಕ್ಕೆ ಪ್ರತ್ಯೇಕವಾದ APP ಸಿದ್ದಪಡಿಸಲಾಗಿದ್ದು ಸಧ್ಯದಲ್ಲೇ ಈ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಪೂರ್ಣಸಿದ್ಧತೆಗಳನ್ನು ಮಾಡಿಕೊಳ್ಳತಕ್ಕದ್ದು ಹಾಗೂ ಸಭೆಯಲ್ಲಿ ಚರ್ಚಿಸುವುದು.
3. ವಾರ್ಡ್ ವ್ಯಾಪ್ತಿ ಪ್ರದೇಶದಲ್ಲಿ ರಾತಿಹೊತ್ತು ತಪಾಸಣೆ ಕೈಗೊಂಡು ಬೀದಿ ಬದಿ ಮಲಗುವವರ ನಿರಾಶ್ರಿತರ ಸಂಖ್ಯೆಯನ್ನು ಕಲೆಹಾಕಲು ಅಗತ್ಯ ಕ್ರಮವಹಿಸುವುದು ಎಂಬ ಬಗ್ಗೆ ಸಭೆಯಲ್ಲಿ ಚರ್ಚಿಸಿ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿಲಾಯಿತು.

- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**
  1. ವಾರ್ಡ್‌ನ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಕಸ ಸಂಗ್ರಹಣೆ ಮತ್ತು ಸಾಗಣಿಕೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನ ಚಾಲಕರು ಮತ್ತು ಸಹಾಯಕರುಗಳು ತ್ಯಾಜ್ಯ ವಿಗಂಡಣೆ ಮಾಡಿ ಕಸ ಸಂಗ್ರಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ರವರಿಗೆ ಸೂಚಿಸಲಾಯಿತು.
  2. ಪ್ರತಿ ದಿನ ವಾರ್ಡ್ ಪ್ರದೇಶದಲ್ಲಿ ಉತ್ಪತಿಯಾಗು ತ್ಯಾಜ್ಯ ವಿಲೇವಾರಿ ಅಭಿವೃದ್ಧಿ ಮಾಡುವಂತೆ ಸಂಬಂದಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
  3. ವಾರ್ಡ್ ವ್ಯಾಪ್ತಿಯ ಬ್ಲಾಕ್ ಸ್ಪಾಟ್‌ಗಳಲ್ಲಿ ಸಿಸಿಟಿವಿ ಕ್ಯಾಮರ ಅಳವಡಿಸುವ ಕುರಿತು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಅಧಿಕಾರಿಗಳಿಗೆ ಸೂಚಿಸಲಾಯಿತು.
  4. ಕಸ ವಿಲೇವಾರಿ ಕುರಿತು ದಂಡ ವಿದಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ವಾರ್ಡ್ ಮಾರ್ಷಲ್‌ಗೆ ಸೂಚಿಸಲಾಯಿತು.

- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ:**
  1. ವಾರ್ಡ್ ಪ್ರದೇಶ ಸಾರ್ವಜನಿಕರಿಗೆ ಕೋವಿಡ್-19 ರ ಪರೀಕ್ಷೆ (Rapid Checkup) ಹೆಚ್ಚು ಮಾಡುವಂತೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.
  2. ಮಾಸ್ಕ ಧರಿಸಲು ಸಾರ್ವಜನಿಕರುಗಳಿಗೆ ಜಾಗೃತಿ ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಲಾಯಿತು.

- **ವಿದ್ಯುತ್ ವಿಭಾದ ರವರಿಗೆ:**
  1. ಎಸ್.ಕೆ ಗಾರ್ಡನ್ ವಾರ್ಡ್ ವ್ಯಾಪ್ತಿಯಲ್ಲಿ ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಸರಿಪಡಿಸುವುದು ಹಾಗೂ ಎಲ್‌ಇಡಿ ಲೈಟ್ ಅಳವಡಿಸುವಂತೆ ಸೂಚಿಸಲಾಯಿತು.

- **ಕಾಮಗಾರಿ ಇಲಾಖೆಗೆ.**
  1. ಎ.ಕೆ ಕಾಲೋನಿ ಮುಖ್ಯ ರಸ್ತೆಯಲ್ಲಿ ಸಿಸಿ ರೋಡ್ಸ್ ನಿರ್ಮಾಣ ಮಾಡುವಂತೆ ಕಾಮಗಾರಿಯ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಪುಲಕೇಶಿನಗರ ರವರಿಗೆ ಸೂಚಿಸಲಾಯಿತು.
  2. ಪಿ.ಎನ್ ಮುರಳಿ ರವರು ಮಾನ್ಯ ಜಂಟಿ ಆಯುಕ್ತರು ಪೂರ್ವ ರವರಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ವಾಸವಿರು ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ 23 ಒಂಟಿ ಮನೆಗಳನ್ನು ನಿರ್ಮಿಸಲು ಆದೇಶ ನೀಡುವಂತೆ ಕೋರಿಕೊಂಡಿರುವ ಮೆರಗೆ ವಾರ್ಡ್ ಕಮಿಟಿ ಸಭೆಯಲ್ಲಿ ಸದರಿ ವಿಷಯದ ಬಗ್ಗೆ ಚರ್ಚಿಸಿ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ವಿಭಾಗ ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

- **ಬಿಡಬ್ಲೂಎಸ್‌ಎಸ್‌ಬಿ ಇಲಾಖೆ:**
  1. ಡಿ.ಜೆ ಹಳ್ಳಿ ವ್ಯಾಪ್ತಿಯ ಮದಿ ಮಹಲ್ಲ ವಸತಿ ಗೃಹಗಳಲ್ಲಿನ ಸ್ಯಾನಿಟರಿ ದುರಸ್ಥಿಗೊಂಡಿರುವುದನ್ನು ಸರಿಪಡಿಸುವಂತೆ ಸಂಬಂಧಪಟ್ಟ ಬಿಡಬ್ಲೂಎಸ್‌ಎಸ್‌ಬಿ ಸಹಾಯಕ ಅಭಿಯಂತರರು ರವರಿಗೆ ಸೂಚಿಸಲಾಯಿತು.

- **ಕಂದಾಯ ಇಳಾಖೆ:**
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಆದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

(ಅತೀಫ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ
02 ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಮಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಮಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07 ಸಹಾಯಕ ಕಾರ್ಯಪಾಲಕ ಅಭಿಯಂತರರು (ಮಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಮಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ